# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 139 | Pages. 2 | Date: 07-05-2026, THURSDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 139 – ಪುಟಗಳು : 2 | 07-05-2026 | ಗುರುವಾರ | Ph: 8762954248 | ದರ : ₹1


# ಅರ್ಜುನ ಜನಮಾನಸದಲ್ಲಿ ಅಜರಾಮರ

## ದಬ್ಬಳಿಕಟ್ಟೆಯಲ್ಲಿ ಸ್ಮಾರಕ ಲೋಕಾರ್ಪಣೆ | ವರ್ಷಗಳ ಕನಸು-ನನಸು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕಾಡಾನೆ ಸೆರೆ ಕಾರ್ಯಾಚರಣೆ ವೇಳೆ ಹಲವರ ಜೀವ ಉಳಿಸಿ ಹುತಾತ್ಮನಾದ ಕ್ಯಾಪ್ಟನ್ ಖ್ಯಾತಿಯ ಅರ್ಜುನ ನಿಧನ ಹೊಂದಿದ ಸ್ಥಳದಲ್ಲಿ ಸ್ಮಾರಕ ನಿರ್ಮಿಸಿದ್ದು ಬುಧವಾರ ಅರಣ್ಯ ಸಚಿವ ಈಶ್ವರ್ ಖಂಡ್ರೆ ಲೋಕಾರ್ಪಣೆ ಮಾಡಿದರು.

ಈ ವೇಳೆ ಮಾತನಾಡಿದ ಅವರು, ಪ್ರವಾಸಿಗರ ಸುರಕ್ಷತೆಯನ್ನು ದೃಷ್ಟಿಯಲ್ಲಿಟ್ಟುಕೊಂಡು, ಹುತಾತ್ಮ ಅರ್ಜುನನ ಸ್ಮಾರಕ ಸ್ಥಳಕ್ಕೆ ಹೋಗಲು ಈಗ ನಿರ್ಮಿಸಿರುವ ಕಚ್ಚಾ ರಸ್ತೆಯಲ್ಲಿ ಪಕ್ಕಾ ರಸ್ತೆ ಮಾಡುವ ಬಗ್ಗೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

8 ಬಾರಿ 750 ಕೆ.ಜಿ. ತೂಕದ ಚಿನ್ನದ ಅಂಬಾರಿ ಹೊತ್ತು ಗಜ ಗಾಂಭೀರ್ಯದಿಂದ ಹೆಜ್ಜೆಹಾಕಿದ್ದ ಅರ್ಜುನ, ಅರಣ್ಯ ಇಲಾಖೆಯ ನೆಚ್ಚಿನ ಆನೆಯಾಗಿತ್ತು. ಯಾವುದೇ ಪುಂಡಾನೆ ಸೆರೆ ಕಾರ್ಯಾಚರಣೆ ಅಥವಾ ಹುಲಿ ಸೆರೆ ಕಾರ್ಯಾಚರಣೆ ಎಂದೊಡನೆ ಮೊದಲು ನೆನಪಿಗೆ ಬರುತ್ತಿದ್ದುದೇ ಅರ್ಜುನ ಎಂದರು.

ಪುಂಡಾನೆ ಸೆರೆ ಕಾರ್ಯಾಚರಣೆ ವೇಳೆ ಅರ್ಜುನ ಇದೇ ಯಸಳೂರು ಬಳಿ ತನ್ನ ಪ್ರಾಣವನ್ನು ಬಲಿಕೊಟ್ಟು, ವೈದ್ಯರು ಮತ್ತು ಅರಣ್ಯ ಸಿಬ್ಬಂದಿಯ ಜೀವ ಉಳಿಸಿ ಹುತಾತ್ಮನಾಗಿದ್ದಾನೆ. ಅರ್ಜುನನ ಸಾಧನೆ, ಕೊಡುಗೆ ಅನುಪಮವಾದ್ದು, ಹೀಗಾಗಿ ಮುಂದಿನ ಪೀಳಿಗೆಗೆ ಅರ್ಜುನನ ಯಶೋಗಾಥೆಯನ್ನು ಪರಿಚಯಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಅರ್ಜುನ ಆನೆ ಚಿನ್ನದ ಅಂಬಾರಿ ಹೊತ್ತು ಸಾಗುತ್ತಿದ್ದ ಚಿತ್ರಗಳು, ಹುಲಿ, ಆನೆ ಸೆರೆ ಕಾರ್ಯಾಚರಣೆಯ ಅಪರೂಪದ ಚಿತ್ರಗಳನ್ನು ಫಲಕಗಳಲ್ಲಿ ಹಾಕುವ ಮೂಲಕ ಅರ್ಜುನನ ಸಾಹಸ ಅಭಿಮಾನಿಗಳಿಗೆ ತಿಳಿಯುವಂತೆ ಮಾಡಿ ಎಂದರು.

### ಋತುಮಾನ ಬದಲಾವಣೆ

ಜಾಗತಿಕ ತಾಪಮಾನ ಏರಿಕೆಯಿಂದ ಇಂದು ಋತುಮಾನಗಳೇ ಬದಲಾಗಿವೆ. ಒಂದು ತಿಂಗಳಲ್ಲಿ ಬೀಳುವ ಮಳೆ ಒಂದು ವಾರದಲ್ಲಿ ಬೀಳುತ್ತಿದೆ. ಒಂದು ವಾರದ ಮಳೆ ಒಂದು ದಿನದಲ್ಲಿ, ಒಂದು ದಿನವಿಡೀ ಬೀಳುವ ಮಳೆ ಒಂದು ಗಂಟೆಯಲ್ಲಿ ಬೀಳುತ್ತಿದ್ದು, ಇದರಿಂದ ಅನಾಹುತಗಳು ಸಂಭವಿಸುತ್ತಿವೆ. ಹೀಗಾಗಿ ಪ್ರಕೃತಿ ಪರಿಸರ ಉಳಿಸುವ ಕಾರ್ಯವನ್ನು ಎಲ್ಲರೂ ಮಾಡಬೇಕು ಎಂದರು.

ಹಾಸನ, ಚಿಕ್ಕಮಗಳೂರು, ಕೊಡಗು ಭಾಗದಲ್ಲಿ ನೂರಾರು ಆನೆಗಳು ಅರಣ್ಯದ ಹೊರಗೆ ಇದ್ದು, ತೋಟದ ಆನೆಗಳಾಗಿವೆ. ಈ ಆನೆಗಳು ತೆನೆ ಒಡೆಯುವ ಸಮಯದಲ್ಲಿ ಹೆಚ್ಚಾಗಿ ನಾಡಿಗೆ ಬರುತ್ತವೆ. ಆಗ ಸಂಘರ್ಷ ಹೆಚ್ಚುತ್ತದೆ ಎಂದು ತಜ್ಞರು ಹೇಳುತ್ತಾರೆ ಎಂದರು.



### ಲೋಕಾರ್ಪಣೆ ವಿಷಯ ಮಾವುತನಿಗೆ ಗೊತ್ತಿಲ್ಲ

ಸ್ಮಾರಕ ಲೋಕಾರ್ಪಣೆಗೊಂಡ ನಂತರ ಅರ್ಜುನನ ಮಾವುತ ವಿನು ಅರ್ಜುನನ ಸ್ಮಾರಕಕ್ಕೆ ಪೂಜೆ ಸಲ್ಲಿಸಿ ಕಣ್ಣೀರಿಟ್ಟರು.

ಈ ವೇಳೆ ಅರಣ್ಯ ಇಲಾಖೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಅವರು, ನಾನು ಅರ್ಜುನನ್ನು ಸಾಕಿದ್ದೇನೆ. ನನ್ನ ಹೆಂಡತಿ ಮತ್ತು ಮಕ್ಕಳ ಜೊತೆ ಅವನನ್ನು ಬೆಳೆಸಿದ್ದೇನೆ. ಸ್ಮಾರಕ ಲೋಕಾರ್ಪಣೆ ಕಾರ್ಯಕ್ರಮದ ಬಗ್ಗೆ ನನಗೆ ಮಾಹಿತಿ ನೀಡಿಲ್ಲವೆಂದು ಅಸಮಾಧಾನ ವ್ಯಕ್ತಪಡಿಸಿದರು.

ಶಿಲ್ಪಿ ಧನಂಜಯ ಅವರು ಸ್ಮಾರಕ ನಿರ್ಮಿಸಿದ್ದಾರೆ. 10 ಅಡಿ ಎತ್ತರ, 13 ಅಡಿ ಅಗಲದ ಅರ್ಜುನನ ಸ್ಮಾರಕ ಆಕರ್ಷಕವಾಗಿ ಮೂಡಿಬಂದಿದೆ.

### ವನ್ಯಜೀವಿ ಸಂಖ್ಯೆಯಲ್ಲಿ ಹೆಚ್ಚಳ

1972ರಲ್ಲಿ ಬಂಡೀಪುರದಲ್ಲಿ ಕೇವಲ 110 ಇದ್ದ ಆನೆಗಳ ಸಂಖ್ಯೆ ಈಗ 1100ಕ್ಕೆ ಏರಿಕೆಯಾಗಿದೆ. ರಾಜ್ಯದಲ್ಲಿ 6395 ಆನೆಗಳಿವೆ. ಹೀಗಾಗಿ 1970ರ ದಶಕದಲ್ಲಿ ಕುಟುಂಬ ಯೋಜನೆ ಜಾರಿಗೆ ತಂದು ನಾವಿಬ್ಬರು-ನಮಗಿಬ್ಬರು ಎಂಬ ಸಂದೇಶವನ್ನು ಜನರಿಗೆ ತಲುಪಿಸಿದ ರೀತಿಯಲ್ಲೇ ಆಯ್ದ ಪ್ರದೇಶದಲ್ಲಿ ಆಯ್ದ ವನ್ಯಜೀವಿಗಳಿಗೆ ಸಂತಾನಶಕ್ತಿ ನಿಯಂತ್ರಣ ಮಾಡುವ ಅಗತ್ಯವಿದೆ. ಈ ಬಗ್ಗೆ ಚರ್ಚೆ ಆಗಬೇಕೆಂಬ ಹೇಳಿಕೆ ನೀಡಿದ್ದೇನೆ. ಈ ಬಗ್ಗೆ ಜನಾಭಿಪ್ರಾಯ ಮೂಡಬೇಕೆಂದು ಸಚಿವ ಈಶ್ವರ್ ಖಂಡ್ರೆ ಹೇಳಿದರು.

ಕಾಡಿನ ಹೊರಗೆ ಇರುವ ಆನೆಗಳನ್ನು ಒಂದು ಕಡೆ ಕಲೆ ಹಾಕಲು ಆನೆಧಾಮ ಮಾಡಲು ಸರ್ಕಾರ ತೀರ್ಮಾನಿಸಿದ್ದು, ಅದಕ್ಕೆ 2 ಸಾವಿರ ಹೆಕ್ಟೇರ್ ಜಮೀನು ಗುರುತಿಸಲಾಗಿದೆ. ಶೀಘ್ರವೇ ಈ ಕಾಮಗಾರಿಗೆ ಚಾಲನೆ ನೀಡಲಾಗುವುದೆಂದರು.

ವನ್ಯಜೀವಿಗಳಿಂದ ಆಗುವ ಬೆಳೆ ಹಾನಿ ಪರಿಹಾರವನ್ನೂ ವಿಳಂಬವಿಲ್ಲದೆ ಪಾವತಿಸಲಾಗುತ್ತಿದೆ.

ರೈತರ ಪರವಾಗಿ ಸರ್ಕಾರವಿದ್ದು, ಪರಿಹಾರದ ಮೊತ್ತ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು ಎಂದರು. ಸಫಾರಿಯಿಂದ ನಮ್ಮ ಇಲಾಖೆಯ ವಿವಿಧ ಪ್ರತಿಷ್ಠಾನಕ್ಕೆ ಬರುವ ಆದಾಯದಲ್ಲಿ ಶೇ.33ರಷ್ಟು ಹಣವನ್ನು ಕಾಡಿನಂಚಿನ ಜನರ ಜೀವನಮಟ್ಟ ಉತ್ತಮಪಡಿಸಲು ವಿನಿಯೋಗಿಸಲು ಸೂಚಿಸಲಾಗಿದ್ದು, ಕೊಡಗಿನಲ್ಲಿ ಫಲಾನುಭವಿಗಳಿಗೆ ಹೊಲಿಗೆಯಂತ್ರ, ಜೇನುಪೆಟ್ಟಿಗೆಗಳನ್ನು ನೀಡಿದ್ದಾಗಿ ತಿಳಿಸಿದರು.

ಹಾಸನಕ್ಕೆ ಅರಣ್ಯ ಸಚಿವನಾಗಿ ತಾವು 8 ಬಾರಿ ಆಗಮಿಸಿರುವುದಾಗಿ ಹೇಳಿದ ಅವರು, ಜಿಲ್ಲೆಯ ಜನರ ಸಮಸ್ಯೆ ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುವ ಭರವಸೆಯನ್ನು ಈಶ್ವರ ಖಂಡ್ರೆ ನೀಡಿದರು.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ಸ್ಮಾರಕ ನಿರ್ಮಾಣವಾಗಿದೆಯಾದರೂ ಜಾಗವನ್ನು ಪ್ರವಾಸಿ ತಾಣವಾಗಿಸಬೇಕೆಂಬುದು ನಮ್ಮ ಬೇಡಿಕೆಯಾಗಿತ್ತು. ಕೆಲ ತಿಂಗಳ ಹಿಂದೆಯೇ ಉದ್ಘಾಟನೆಗೆ ನಿರ್ಧರಿಸಿದ್ದರು. ನಾನು ಅದಕ್ಕೆ ವಿರೋಧಿಸಿದ್ದರಿಂದ ಸ್ವಲ್ಪ ಸೌಲಭ್ಯ ಕಲ್ಪಿಸಿದ್ದಾರೆಂದರು.

ಪ್ರವಾಸಿಗರ ಅನುಕೂಲಕ್ಕಾಗಿ ಸಮರ್ಪಕ ರಸ್ತೆ, ಕುಡಿಯುವ ನೀರು, ಶೌಚಾಲಯ, ವಿಶ್ರಾಂತಿ ಕೊಠಡಿ ಹಾಗು ಭದ್ರತಾ ಸಿಬ್ಬಂದಿಗೆ ವಸತಿ ವ್ಯವಸ್ಥೆ ಅಗತ್ಯವಿದೆ. ಮಳೆಗಾಲದಲ್ಲಿ ವಾಹನ ಸಂಚಾರ ಕಷ್ಟವಾಗಿದ್ದು ರಸ್ತೆ ನಿರ್ಮಿಸಿಕೊಡಬೇಕೆಂದು ಆಗ್ರಹಿಸಿದರು.

ವೀರ ಅರ್ಜುನನಿಗೆ ಇನ್ನೂ ಹೆಚ್ಚಿನ ಗೌರವ ದೊರಕಬೇಕಾಗಿತ್ತು. ಭವಿಷ್ಯದಲ್ಲಿ ಕಂಚಿನ ಪ್ರತಿಮೆ ಸ್ಥಾಪನೆ ಮಾಡುವ ಯೋಜನೆ ಕೈಗೊಳ್ಳಬೇಕು. ಪ್ರವಾಸಿಗರ ಸುರಕ್ಷತೆಗಾಗಿ ಬೆಳಿಗ್ಗೆಯಿಂದ ಸಂಜೆ ವರೆಗೆ ಭದ್ರತಾ ವ್ಯವಸ್ಥೆ ಕಟ್ಟುನಿಟ್ಟಾಗಿ ಜಾರಿಯಾಗಬೇಕೆಂದು ಒತ್ತಾಯಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ, ಸಂಸದ ಶ್ರೇಯಸ್ ಪಟೇಲ್,



ಅರಸೀಕೆರೆ ಶಾಸಕ ಕೆ.ಎಂ.ಶಿವಲಿಂಗೇಗೌಡ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಮುರಳಿ ಮೋಹನ್, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಭ್‌ಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ ಮತ್ತಿತರರಿದ್ದರು.

## ಶೃಂಗೇರಿ ಮರು ಮತ ಎಣಿಕೆಯಲ್ಲಿ ಷಡ್ಯಂತ್ರ



> ತಮಿಳುನಾಡಿನಲ್ಲಿ ಕಡಿಮೆ ಅಂತರದಲ್ಲಾದರೂ ಡಿಎಂಕೆ ಮತ್ತೆ ಅಧಿಕಾರಕ್ಕೆ ಬರುತ್ತದೆಂಬ ನಿರೀಕ್ಷೆ ಹುಸಿಯಾಗಿದೆ. ಈ ಬಾರಿ ಅಲ್ಲಿನ ಯುವ ಸಮುದಾಯ ಬದಲಾವಣೆ ಬಯಸಿದೆ. ರಾಜಕೀಯ ವಿಶ್ಲೇಷಣೆಗಿಂತ ಬದಲಾವಣೆಯನ್ನು ಅಲ್ಲಿನ ಜನರು ಬಯಸಿದ್ದಾರೆ. ಯುವಕರು ಹೊಸ ಅಧ್ಯಾಯ ಆರಂಭ ಮಾಡಿದ್ದಾರೆ. ಜನರ ಅಭಿಪ್ರಾಯವನ್ನು ಸಮಚಿತ್ತದಿಂದ ಸ್ವೀಕರಿಸುತ್ತೇವೆ.
>
> – ಕೃಷ್ಣಬೈರೇಗೌಡ,
> ಜಿಲ್ಲಾ ಉಸ್ತುವಾರಿ ಸಚಿವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಚಿಕ್ಕಮಗಳೂರು ಜಿಲ್ಲೆ ಶೃಂಗೇರಿ ಕ್ಷೇತ್ರದ ಮರು ಎಣಿಕೆಯಲ್ಲಿ ದೊಡ್ಡ ಷಡ್ಯಂತ್ರ ನಡೆದಿದೆ.

ಕಳೆದ ಬಾರಿ ಮತ ಎಣಿಕೆಯಾದ ನಂತರ ಕೆಲವು ಅಂಚೆ ಮತಪತ್ರಗಳನ್ನು ತಿದ್ದಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಆರೋಪಿಸಿದರು.

ಸುದ್ದಿಗಾರರೊಂದಿಗೆ ಬುಧವಾರ ಮಾತನಾಡಿದ ಅವರು, ಅಂಚೆ ಮತಗಳನ್ನು ಎಣಿಕೆ ಮಾಡಿ ಎಲ್ಲಾ ಪಕ್ಷದ ಏಜೆಂಟ್‌ರು ಅದಕ್ಕೆ ಸಹಿ ಹಾಕಿರುತ್ತಾರೆ. ಆದರೆ ನಮ್ಮ ಅಭ್ಯರ್ಥಿ ರಾಜೇಗೌಡರಿಗೆ ದೊರೆತ ಮತಗಳ ಕೆಳಗೆ ಬೇರೆ ಇಂಕ್ ಉಪಯೋಗಿಸಿ, ಬೇರೆ ಅಭ್ಯರ್ಥಿಗಳಿಗೂ ಕೂಡ ಅಲ್ಲಿ ಟಿಕ್ ಮಾರ್ಕ್ ಮಾಡಿ, ಆ ಮತಗಳನ್ನು ಅನರ್ಹವಾಗುವಂತೆ ಮಾಡಿದ್ದಾರೆಂದು ಗಂಭೀರ ಆರೋಪ ಮಾಡಿದರು.

ಈ ಪ್ರಕರಣದಲ್ಲಿ ಷಡ್ಯಂತ್ರ ನಡೆದಿದೆ. ಸತ್ಯ ಹೊರಗೆ ಬರಬೇಕಾದರೆ ಪಾರದರ್ಶಕ ತನಿಖೆ ಆಗಬೇಕು. ಎಫ್‌ಎಸ್‌ಎಲ್‌ಗೆ ಕಳುಹಿಸಿ ಮೇಲೆ ಟಿಕ್ ಮಾಡಿರುವ ಇಂಕ್ ಹಾಗೂ ಕೆಳಗೆ ಟಿಕ್ ಮಾಡಿರುವ ಇಂಕ್ ಬೇರೆ ಬೇರೆಯೇ ಎಂಬುದನ್ನು ಪತ್ತೆ ಹಚ್ಚಬೇಕು. ಯಾರೋ ಕೆಲವು ಅಧಿಕಾರಿಗಳು ರಾಜೇಗೌಡರಿಗೆ ಬಂದಿದ್ದ ಮತಗಳನ್ನು ಒಂದೇ ಬಂಡಲ್‌ನಲ್ಲಿ ಇಟ್ಟಿದ್ದು, ಅದರಲ್ಲಿ ಬೇರೆ ಅಭ್ಯರ್ಥಿಗಳಿಗೆ ಟಿಕ್ ಒಂದೇ ಬಂಡಲ್‌ನಲ್ಲಿ ಆಗಿರುವುದು, ಬಂಡಲ್ ಎಣಿಕೆ ಆದಾಗ ಓಪನ್ ಆಗಿತ್ತು. ಇದೆಲ್ಲದರ ಬಗ್ಗೆ ತನಿಖೆಯಿಂದ ಸತ್ಯ ಹೊರಬರಬೇಕಾಗುತ್ತದೆ ಎಂದರು.

ಪಶ್ಚಿಮ ಬಂಗಾಳದಲ್ಲಿ ಟಿಎಂಸಿ ನಾಯಕಿ ಮಮತಾ ಬ್ಯಾನರ್ಜಿ ಅವರಿಗೆ ಕೊಡಬಾರದ ಹಿಂಸೆ ಕೊಟ್ಟು, ಕೈ ಕಾಲು ಕಟ್ಟಿ ಬಿಜೆಪಿಯವರು ಅಧಿಕಾರಕ್ಕೆ ಬಂದಿದ್ದಾರೆ ಹೊರತು ನ್ಯಾಯ ಮಾರ್ಗದಿಂದ ಅಲ್ಲ. ಬಿಜೆಪಿ ನ್ಯಾಯ, ಧರ್ಮಯುತ ಮಾರ್ಗದಲ್ಲಿ ಅಧಿಕಾರಕ್ಕೆ ಬಂದಿಲ್ಲ. ಇಡಿ, ಸಿಬಿಐ, ಐಟಿ, ಚುನಾವಣಾ ಆಯೋಗಗಳನ್ನು ದುರುಪಯೋಗ ಮಾಡಿಕೊಂಡಿದ್ದಾರೆ. ನಾವು ಜನರ ತೀರ್ಮಾನವನ್ನು ಒಪ್ಪಲೇಬೇಕು. ಮತದಾರರ ತೀರ್ಪನ್ನು ಗೌರವಿಸಬೇಕಾಗುತ್ತದೆಂದರು.

ಕೇರಳದಲ್ಲಿ ನಿರೀಕ್ಷೆಗೂ ಮೀರಿ ಕಾಂಗ್ರೆಸ್‌ಗೆ ಫಲಿತಾಂಶ ಬಂದಿರುವುದು ಸ್ವಲ್ಪಮಟ್ಟಿಗೆ ಸಮಾಧಾನ ತಂದಿದೆ. ಎಲ್‌ಡಿಎಫ್ ಹಾಗು ಯುಡಿಎಫ್ ನಡುವೆ ನೇರ ಹಣಾಹಣಿ ಏರ್ಪಟ್ಟಿತ್ತು. ಅಲ್ಲಿನ ಜನರು ನಮಗೆ ಬೆಂಬಲಿಸಿರುವುದು ಖುಷಿಯ ವಿಚಾರ ಎಂದರು.

## 50 ಲಕ್ಷ ರೂ. ವೆಚ್ಚದ ರಸ್ತೆ, ಚರಂಡಿ ಕಾಮಗಾರಿಗೆ ಭೂಮಿಪೂಜೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಚನ್ನಪಟ್ಟಣ ಬಡಾವಣೆಯಲ್ಲಿ ಎಸ್‌ಸಿಪಿ ಯೋಜನೆಡಿ 50 ಲಕ್ಷ ರೂ. ವೆಚ್ಚದ ಕಾಂಕ್ರೀಟ್ ರಸ್ತೆ ಮತ್ತು ಚರಂಡಿ ಕಾಮಗಾರಿಗೆ ಶಾಸಕ ಹೆಚ್.ಪಿ.ಸ್ವರೂಪ್ ಬುಧವಾರ ಭೂಮಿಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಶಾಸಕರು, ಮಳೆಗಾಲ ಪ್ರಾರಂಭವಾಗಿರುವ ಪ್ರಸ್ತುತ ಸಂದರ್ಭದಲ್ಲಿ ಒಳಚರಂಡಿ ಹಾಗೂ



ರಸ್ತೆ ಸಮಸ್ಯೆಯಿಂದ ಬಳಲುತ್ತಿದ್ದ ಬಡಾವಣೆ ಜನರ ಸಮಸ್ಯೆಯನ್ನು ಪರಿಗಣಿಸಿ ಕಾಮಗಾರಿ ಕೈಗೊಳ್ಳಲಾಗಿದೆ. ಕೆಲವೇ ದಿನಗಳಲ್ಲಿ ಕಾಮಗಾರಿ ಮುಗಿಸಿ ಅನುಕೂಲ ಕಲ್ಪಿಸಲಾಗುವುದು ಎಂದರು.

ಬಡಾವಣೆ ಅಭಿವೃದ್ಧಿಗೆ ಇನ್ನಷ್ಟು ಕೆಲಸ ಆಗಬೇಕಿದ್ದು ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುವುದು. ಸ್ಥಳೀಯರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ್ದೇನೆ. ಸಾರ್ವಜನಿಕರ ಸಹಕಾರದಿಂದ ಮೂಲ ಸೌಕರ್ಯ ಕಲ್ಪಿಸಲಾಗುವುದೆಂದು ಭರವಸೆ ನೀಡಿದರು. ಪಕ್ಷದ ಮುಖಂಡರು ಹಾಗೂ ಸ್ಥಳೀಯರು ಹಾಜರಿದ್ದರು.

## ನಮ್ಮಿಂದಾಗದ ಪ್ರಯತ್ನಕ್ಕೆ ಕುಂಟು ನೆಪ ಹೇಳಬಾರದು

### ವಿದ್ಯಾರ್ಥಿಗಳಿಗೆ ಸಚಿವ ಕೃಷ್ಣಬೈರೇಗೌಡ ಸಲಹೆ | ಅಭಿನಂದನಾ ಸಮಾರಂಭ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜೀವನದಲ್ಲಿ ನಮ್ಮಿಂದಾಗುವ ತಪ್ಪುಗಳಿಗೆ ಕುಂಟು ನೆಪ ಹೇಳಿ ಜಾರಿಕೊಳ್ಳುವ ಪ್ರಯತ್ನ ಮಾಡಬಾರದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಬುಧವಾರ ಏರ್ಪಡಿಸಿದ್ದ ಹಾಸನದ ಹೆಮ್ಮೆ-2026 ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆಗೈದ ವಿದ್ಯಾರ್ಥಿಗಳಿಗೆ ಮತ್ತು ಶಾಲೆಗಳಿಗೆ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು.



ನಾನು ದ್ವಿತೀಯ ಪಿಯುಸಿ ಅನುತ್ತೀರ್ಣನಾಗಿದ್ದೆ. ಪಿಯುಸಿ ಫೇಲ್ ಆದ ವ್ಯಕ್ತಿಯಿಂದ ಸನ್ಮಾನ ಮಾಡಿಸಿಕೊಳ್ಳಬೇಕಾ ಎಂಬ ಜಿಜ್ಞಾಸೆ ನಿಮ್ಮನ್ನು ಕಾಡಬಹುದು. ಫೇಲ್ ಆಗಿದ್ದೆ ಎಂದು ಹೇಳಿಕೊಳ್ಳಲು ನನಗೆ ಮುಜುಗರವಿಲ್ಲ. ನನ್ನ ಸೋಮಾರಿತನದಿಂದ ಅನುತ್ತೀರ್ಣನಾಗಿದ್ದೇ ಹೊರತು ಬೇರೆ ಕಾರಣಗಳಿಂದ ಅಲ್ಲ. ಆ ಬಳಿಕ ತಾಯಿಯ ಮಾರ್ಗದರ್ಶನದಂತೆ ಪರೀಕ್ಷೆ ಪಾಸಾಗಿ ವಿದೇಶದಲ್ಲಿ ವ್ಯಾಸಂಗ ಮುಗಿಸಿ ಈಗ ಈ ಸ್ಥಿತಿಯಲ್ಲಿದ್ದೇನೆ. ಸರಿಯಾದ ದಾರಿಯಲ್ಲಿ ಪ್ರಯತ್ನಿಸಿದರೆ ಯಶಸ್ಸು ಖಚಿತ ಎಂದು ವಿದ್ಯಾರ್ಥಿಗಳಿಗೆ ತಮ್ಮದೇ ಕಥೆ ಹೇಳುವ ಮೂಲಕ ಸಚಿವರು ಆತ್ಮಸ್ಥೈರ್ಯ ತುಂಬಿದರು.

ಜೀವನದಲ್ಲಿ ಯಾರೂ ಕಸಿದುಕೊಳ್ಳಲಾಗದೆ ಆಸ್ತಿ ಎಂದರೆ ಅದು ವಿದ್ಯೆ ಮಾತ್ರ. ಜ್ಞಾನದಿಂದ ಅಂದುಕೊಂಡದ್ದನ್ನು ಸಾಧಿಸಬಹುದು.

ಪರೀಕ್ಷೆಗಾಗಿ ಕಷ್ಟಪಟ್ಟು ಓದಿ ಅಂಕ ಗಳಿಸಿರುವುದು ವಿದ್ಯಾರ್ಥಿಗಳೇ ಆಗಿದ್ದರೂ ಅವರ ಸಾಧನೆಯಲ್ಲಿ ಪೋಷಕರು, ಶಿಕ್ಷಕರು ಹಾಗು ಜಿಲ್ಲೆಯ ಜನರು ಸಂತಸಪಡುತ್ತಿದ್ದಾರೆ. ನಾವು ಯಾವತ್ತಿಗೂ ಇನ್ನೊಬ್ಬರ ಸಂತೋಷಕ್ಕೆ ಕಾರಣರಾಗಬೇಕೆಂದರು.

ತಂದೆ-ತಾಯಿ ಖುಷಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಜೀವನದಲ್ಲಿ ಏನನ್ನು ಬೇಕಾದರೂ ಸಂಪಾದಿಸಬಹುದು. ಆದರೆ ಅದೆಲ್ಲವನ್ನು ಹೇಗೆ ಪಡೆದಿರುತ್ತೇವೆಯೋ ಹಾಗೆಯೇ ಕಳೆದುಕೊಳ್ಳಬಹುದು. ಈ ಬದುಕಿಗೆ ಯಾವ ಗ್ಯಾರಂಟಿ ಇಲ್ಲ. ಕಲಿತ ವಿದ್ಯೆ ಮಾತ್ರ ಕೊನೆಯ ಉಸಿರು ಇರುವವರೆಗೆ ಜೊತೆಗಿರುತ್ತದೆ ಎಂದರು.

ಜಿಲ್ಲೆಯ 241 ಸರ್ಕಾರಿ ಪ್ರೌಢ ಶಾಲೆಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ. 98.9 ಹಾಗೂ 143 ಖಾಸಗಿ ಶಾಲೆಗಳು ಶೇ. 99.46 ಫಲಿತಾಂಶ ಗಳಿಸಿವೆ. ಮುರಾರ್ಜಿ ವಸತಿ ಶಾಲೆ ಶೇ. 95, ಅನುದಾನಿತ ಶಾಲೆಗಳು ಶೇ. 96.6 ಫಲಿತಾಂಶ ಸಾಧಿಸಿವೆ. ಅದೇ ರೀತಿ ಪಿಯುಸಿಯಲ್ಲಿ ಶೇ. 80 ರಷ್ಟು ಫಲಿತಾಂಶವನ್ನು ಸರ್ಕಾರಿ ಹಾಗೂ ಶೇ. 96 ರಷ್ಟು ಖಾಸಗಿ ಕಾಲೇಜುಗಳು ಪಡೆದಿವೆ. ಖಾಸಗಿ ಶಿಕ್ಷಣ ಸಂಸ್ಥೆಗಳು ಮಾಡಿರುವ ಸಾಧನೆಯನ್ನು ಸರ್ಕಾರಿ ಶಾಲೆಗಳು ಮಾಡಿ ತೋರಿಸಿವೆ. ಆದ್ದರಿಂದ ಸರ್ಕಾರಿ ಶಾಲೆಗಳಿಗೆ ತಮ್ಮ ಮಕ್ಕಳನ್ನು ಸೇರಿಸಿ ಎಂದು ಪೋಷಕರಿಗೆ ಕರೆ ನೀಡಿದರು.

ಅರಸೀಕೆರೆ ಶಾಸಕ ಕೆ.ಎಂ.ಶಿವಲಿಂಗೇಗೌಡ ಮಾತನಾಡಿ, ಆಧುನಿಕತೆ ಬೆಳೆದಂತೆ ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ. ಅಂಗೈಯಲ್ಲಿ ಪ್ರಪಂಚದ ಪ್ರತಿ ವಿದ್ಯಮಾನವನ್ನು ಅರಿಯುವ ಸ್ಥಿತಿಯಲ್ಲಿ ನಾವಿದ್ದೇವೆ. ಆದ್ದರಿಂದ ವಿದ್ಯಾರ್ಥಿಗಳು ಹೊಸತನವನ್ನು ಅಳವಡಿಸಿಕೊಂಡು ಮುನ್ನಡೆಯಬೇಕು. ಪ್ರಪಂಚವನ್ನು ಅರಿತರೆ ವೈವಿಧ್ಯಮಯ ಕ್ಷೇತ್ರಗಳಲ್ಲಿ ಕೆಲಸ ಮಾಡಲು ಅನುಕೂಲವಾಗುತ್ತದೆ ಎಂದರು.

ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಹೋಲಿಸಿದರೆ ಸರ್ಕಾರಿ ಶಾಲೆಗಳಲ್ಲಿ ಮೂಲಸೌಕರ್ಯ ಕೊರತೆ ಇರುತ್ತದೆ. ಆ ಕೊರತೆಯನ್ನು ಹೋಗಲಾಡಿಸಬೇಕೆಂಬ ಉದ್ದೇಶದಿಂದ ಕರ್ನಾಟಕ ಪಬ್ಲಿಕ್ ಸ್ಕೂಲ್ ಪ್ರಾರಂಭಿಸಲಾಗುತ್ತಿದೆ. ಎಲ್‌ಕೆಜಿಯಿಂದ ದ್ವಿತೀಯ ಪಿಯು ವರೆಗೆ ಇಂಗ್ಲಿಷ್ ಮಾಧ್ಯಮದಲ್ಲಿ ಶಿಕ್ಷಣ ನೀಡುವ ವ್ಯವಸ್ಥೆಯನ್ನು ನಮ್ಮ ಸರ್ಕಾರ ಜಾರಿಗೊಳಿಸಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಹೆಚ್.ಪಿ.ಸ್ವರೂಪ್, ಬೇಲೂರು ಶಾಸಕ ಹೆಚ್.ಕೆ.ಸುರೇಶ್, ಹುಡಾ ಅಧ್ಯಕ್ಷ ಪಟೇಲ್ ಶಿವಪ್ಪ ಮಾತನಾಡಿದರು. ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸ್ವಾಗತಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಭ ಕುಮಾರ್, ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣವರ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ಎನ್.ಬಲರಾವ್, ಶಿಕ್ಷಣಾಧಿಕಾರಿ ಚಂದ್ರಶೇಖರ್, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ಪಿ.ಗಂಗಾಧರ್ ಮತ್ತಿತರರಿದ್ದರು. ಜಿಲ್ಲೆಯ 400 ವಿದ್ಯಾರ್ಥಿಗಳಿಗೆ ಪುರಸ್ಕರಿಸಲಾಯಿತು.

### ಜಿಲ್ಲೆಗೆ ಹೆಮ್ಮೆಯ ಸಂಗತಿ ಸಂಸದ ಶ್ರೇಯಸ್

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಈ ಬಾರಿ ನಮ್ಮ ಜಿಲ್ಲೆ ಉತ್ತಮ ಸಾಧನೆ ಮಾಡಿದೆ. ಶಿಕ್ಷಣದಿಂದ ಮಾತ್ರ ಗುರಿ ತಲುಪಲು ಸಾಧ್ಯವೆಂದು ಡಾ. ಬಿ.ಆರ್.ಅಂಬೇಡ್ಕರ್ ಅವರು ಹೇಳಿದ್ದಾರೆ. ಜಿಲ್ಲೆಯ ವಿದ್ಯಾರ್ಥಿಗಳು ಸಹ ಒಳ್ಳೆಯ ವ್ಯಾಸಂಗದ ಮೂಲಕ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು. ವಿದ್ಯೆ ಕಲಿಸಿದ ಗುರು ಹಾಗು ಹೆತ್ತ ತಂದೆ-ತಾಯಿಗೆ ಗೌರವ ತರಬೇಕು ಎಂದು ಸಲಹೆ ನೀಡಿದರು.



# ಬೇಲೂರು ನೂತನ ಬಸ್ ನಿಲ್ದಾಣಕ್ಕೆ ಮತ್ತೆ ವಿಘ್ನ

## ಸಾರ್ವಜನಿಕರ ಗೋಳು ಕೇಳುವವರಿಲ್ಲ : 10 ಕೋಟಿ ರೂ. ಅನುದಾನ ಕೈತಪ್ಪುವ ಆತಂಕ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಬೇಲೂರು ಪಟ್ಟಣದಲ್ಲಿ ಸಂಚಾರ ದಟ್ಟಣೆ ನಿಯಂತ್ರಣ ಹಾಗೂ ಸಂಚಾರ ವ್ಯವಸ್ಥೆ ಸುಗಮಗೊಳಿಸುವ ಉದ್ದೇಶದಿಂದ ಪಟ್ಟಣ ಹೊರವಲಯದಲ್ಲಿ ಆರಂಭವಾಗಿದ್ದ ನೂತನ ಬಸ್ ನಿಲ್ದಾಣ ಯೋಜನೆಯನ್ನು ಸ್ಥಳೀಯರ ತೀವ್ರ ವಿರೋಧದ ಕಾರಣಕ್ಕೆ ಕೈಬಿಡಲಾಗಿದೆ.

ಆ ಮೂಲಕ ಬಹುವರ್ಷಗಳ ಸಮಸ್ಯೆಗೆ ಪರಿಹಾರ ಸಿಗದಂತಾಗಿದೆ. ಬೇಲೂರು ಐತಿಹಾಸಿಕ ಪ್ರಸಿದ್ಧಿ ಪಡೆದಿರುವ ಸ್ಥಳವಾಗಿದ್ದು ಚನ್ನಕೇಶವ ಸ್ವಾಮಿ ದೇವಾಲಯ ಹಾಗೂ ವಿವಿಧ ಪ್ರವಾಸಿ ತಾಣಗಳ ವೀಕ್ಷಣೆಗೆ ನಿತ್ಯ ಸಾವಿರಾರು ಪ್ರವಾಸಿಗರು ಬರುತ್ತಾರೆ. ಚಿಕ್ಕಮಗಳೂರು, ಶೃಂಗೇರಿ, ಮಂಗಳೂರು ಸೇರಿ ಅನೇಕ ಪ್ರವಾಸಿ ತಾಣಗಳಿಗೆ ಸಂಪರ್ಕಿಸುವ ಪ್ರಮುಖ ಪಟ್ಟಣ ಇದಾಗಿದೆ. ಆದರೆ ದಶಕಗಳ ಹಿಂದೆ ನಿರ್ಮಾಣವಾದ ಬಸ್ ನಿಲ್ದಾಣ ಶಿಥಿಲಾವಸ್ಥೆ ತಲುಪಿರುವುದು ಮಾತ್ರವಲ್ಲದೆ ಕಿರಿದಾದ ಜಾಗವಾಗಿರುವುದರಿಂದ ಸಾರಿಗೆ ಬಸ್‌ಗಳ ಓಡಾಟಕ್ಕೆ ಸಮಸ್ಯೆಯಾಗುತ್ತಿದೆ. ಆ ಹಿನ್ನಲೆಯಲ್ಲಿ ಹೊರವಲಯದ ರಾಯಪುರದಲ್ಲಿ ಬಸ್ ನಿಲ್ದಾಣ



ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿತ್ತು.

ಪ್ರಸ್ತುತ ನಿಲ್ದಾಣದಲ್ಲಿ ಒಂದು ಬಾರಿ ಕೇವಲ ಹತ್ತು ಬಸ್‌ಗಳು ಮಾತ್ರ ನಿಲ್ಲಬಹುದಾಗಿದೆ. ಪ್ರಯಾಣಿಕರು ಕುಳಿತುಕೊಳ್ಳಲು ಜಾಗ, ಸರಿಯಾದ ಶೌಚಾಲಯ ವ್ಯವಸ್ಥೆ ಇಲ್ಲ. ನೂತನ ಬಸ್ ನಿಲ್ದಾಣ ಮಾಡಬೇಕೆಂದು ಕಳೆದ ಎರಡು ದಶಕಗಳಿಂದ ಒತ್ತಾಯ, ಹೋರಾಟಗಳು ನಡೆಯುತ್ತಿವೆ.

**ಸ್ಥಳೀಯರ ವಿರೋಧ ಏಕೆ**

ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ್ದ ಶಾಸಕ ಹೆಚ್.ಕೆ.ಸುರೇಶ್ ಅವರು ಹೊರಭಾಗದಲ್ಲಿ ನೂತನ ಬಸ್ ನಿಲ್ದಾಣಕ್ಕೆ ಮುಂದಾಗಿದ್ದರು. ಆದರೆ, ಇರುವ ಜಾಗದಲ್ಲೇ ಹೊಸ ಬಸ್ ನಿಲ್ದಾಣ ನಿರ್ಮಿಸಬೇಕು. ಬೇರೆ ಕಡೆ ಸ್ಥಳಾಂತರಿಸಿದರೆ ವ್ಯಾಪಾರಿಗಳು ಹಾಗು ಸಾರ್ವಜನಿಕರಿಗೆ ತೊಂದರೆಯಾಗುತ್ತದೆಂಬುದು ಕೆಲವರ ವಾದ. ಈ ವಿಚಾರವಾಗಿ ಪ್ರತಿಭಟನೆಗಳು ನಡೆದ ಹಿನ್ನಲೆಯಲ್ಲಿ ಪ್ರಸ್ತಾವನೆಯನ್ನೇ ಕೈಬಿಡಲಾಗಿದೆ.

ನೂತನ ಬಸ್ ನಿಲ್ದಾಣಕ್ಕೆ ನಬಾಡ್‌ನಿಂದ 10 ಕೋಟಿ ರೂ. ಅನುದಾನ ಸಿಗುವ ಭರವಸೆ ಇದೆ. ಆದರೆ ಸ್ಥಳೀಯರು, ವಿವಿಧ ಸಂಘ-ಸಂಸ್ಥೆಗಳು ಬಸ್ ನಿಲ್ದಾಣ ಸ್ಥಳಾಂತರಕ್ಕೆ ವಿರೋಧ ವ್ಯಕ್ತಪಡಿಸುತ್ತಿರುವ ಕಾರಣ ಲೋಕೋಪಯೋಗಿ ಹಾಗು ಪ್ರವಾಸೋದ್ಯಮ ಸಚಿವರನ್ನು ಭೇಟಿ ಮಾಡಿ ಪಟ್ಟಣದಲ್ಲೇ ಜಾಗ ಹುಡುಕುವ ಪ್ರಯತ್ನ ಮುಂದುವರಿದಿದೆ.

ನಿಲ್ದಾಣದ ಪಕ್ಕದಲ್ಲಿರುವ ಪ್ರವಾಸಿ ಮಂದಿರವನ್ನು ಬೇರೆಡೆಗೆ ಸ್ಥಳಾಂತರಿಸಿ ಆ ಜಾಗವನ್ನು ನೀಡುವಂತೆ ಸಂಬಂಧಪಟ್ಟ ಸಚಿವರು ಹಾಗು ಅಧಿಕಾರಿಗಳಿಗೆ ಮನವರಿಕೆ ಮಾಡಲಾಗಿದೆ. ಮನವಿಗೆ ಸ್ಪಂದಿಸಿ ಜಾಗ ನೀಡಿದರೆ ಬಸ್ ನಿಲುಗಡೆ, ಪ್ರಯಾಣಿಕರಿಗೆ ಆಸನ ವ್ಯವಸ್ಥೆ, ಮಳಿಗೆ, ಶೌಚಾಲಯ ಸೇರಿ ಎಲ್ಲಾ ರೀತಿಯ ಸೌಲಭ್ಯವುಳ್ಳ ಸುಸಜ್ಜಿತ ನಿಲ್ದಾಣ ನಿರ್ಮಿಸಬಹುದು. ಬೇಲೂರು ಪಟ್ಟಣ ವ್ಯಾಪ್ತಿ ವಿಸ್ತರಿಸುತ್ತಿದ್ದು, ಹೊರವಲಯದಲ್ಲಿ ಮತ್ತೊಂದು ಬಸ್ ನಿಲ್ದಾಣ ಮಾಡಬೇಕೆನ್ನುವ ಆಶಯ ಕೂಡ ಇದೆ. ಈ ಬಗ್ಗೆಯೂ ಸಚಿವರ ಗಮನಕ್ಕೆ ತರಲಾಗಿದೆ ಎಂದು ಶಾಸಕ ಹೆಚ್.ಕೆ.ಸುರೇಶ್ ಅವರು ಹೇಳಿದ್ದಾರೆ.

ಹೊಸದಾಗಿ ರಾಯಪುರದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಬಸ್ ನಿಲ್ದಾಣಕ್ಕೆ ಸ್ಥಳೀಯರ ವಿರೋಧಕ್ಕೆ ಬಲವಾದ ಕಾರಣಗಳಿವೆ. ಪಟ್ಟಣದಿಂದ ಭಾರೀ ದೂರದಲ್ಲಿರುವ ಅಲ್ಲಿಗೆ ಕೇವಲ ಬಸ್ ಹತ್ತುವುದಕ್ಕಾಗಿ ಅಷ್ಟು ದೂರ ಹೋಗಲು ಸಾಧ್ಯವಿಲ್ಲ. ಅದಕ್ಕಾಗಿ ಮತ್ತೆ ಆಟೋ ಬಾಡಿಗೆ ನೀಡಬೇಕಾಗುತ್ತದೆ.

ಗ್ರಾಮೀಣ ಭಾಗದಿಂದ ಬರುವವರಿಗೂ ಸಮಸ್ಯೆಯಾಗುತ್ತದೆ. ಪಟ್ಟಣದ ಹೃದಯ ಭಾಗದಲ್ಲೇ ಕಾಮಗಾರಿ ಪ್ರಾರಂಭಿಸಬೇಕೆನ್ನುವುದು ಸ್ಥಳೀಯ ಆಗ್ರಹ. ಹೀಗಾಗಿ ನೂತನ ಕಾಮಗಾರಿಯನ್ನು ಕೈಬಿಡಲಾಗಿದೆ.

# ತರ್ಕ-ಕೌತುಕವೇ ಪತ್ತೆದಾರಿ ಸಾಹಿತ್ಯದ ಜೀವಾಳ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ತರ್ಕಬದ್ಧ ಆಲೋಚನೆ ಮತ್ತು ಕ್ಷಣ ಕ್ಷಣಕ್ಕೂ ಕುತೂಹಲ ಕೆರಳಿಸುವ ಕೌತುಕಗಳು ಪತ್ತೆದಾರಿ ಸಾಹಿತ್ಯದ ಜೀವಾಳ ಎಂದು ಲೇಖಕ ಗೊರೂರು ಶಿವೇಶ್ ಹೇಳಿದರು.

ನಗರದ ಸ್ವಪ್ನ ಬುಕ್ ಹೌಸ್‌ನಲ್ಲಿ ಹಮ್ಮಿಕೊಂಡಿದ್ದ ಲೇಖಕ ದೊಡ್ಡಮನೆ ಆನಂದ್ ಅವರ ಕನ್ನಂಬಾಡಿ ಜೋಡಿ ಕೊಲೆಯ ರಹಸ್ಯ ಎಂಬ ಪತ್ತೆದಾರಿ ಕಾದಂಬರಿ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಆಂಗ್ಲ ಸಾಹಿತ್ಯದ ದಿಗ್ಗಜ ಸರ್. ಆರ್ಥರ್ ಕಾನನ್ ಡಯಾಲ್ ಮತ್ತು ಅಗಾಥಾ ಕ್ರಿಸ್ಟಿ ಅವರ ಪ್ರಭಾವದಿಂದ ಪ್ರೇರಿತವಾದ ಕನ್ನಡ ಪತ್ತೆದಾರಿ ಸಾಹಿತ್ಯ ಲೋಕವು ಎನ್. ನರಸಿಂಹಯ್ಯ ಮತ್ತು ಟಿ.ಕೆ. ರಾಮರಾವ್ ಅಂತಹ ಮಹಾನ್ ಲೇಖಕರಿಂದಾಗಿ ಅಪಾರ ಓದುಗ ವಲಯವನ್ನು ಸೃಷ್ಟಿಸಿಕೊಂಡಿದೆ. ಆ ಪರಂಪರೆಯನ್ನು ದೊಡ್ಡಮನೆ ಆನಂದ್ ಅವರು ಸಮರ್ಥವಾಗಿ ಮುಂದುವರಿಸುತ್ತಿದ್ದಾರೆ. ಈ ಕೃತಿಯು ಓದುಗನನ್ನು ಕೊನೆಯವರೆಗೂ ಕಥೆಯ ಓಘದಲ್ಲಿ ಹಿಡಿದಿಟ್ಟುಕೊಳ್ಳುತ್ತಾ, ಅನಿರೀಕ್ಷಿತ ತಿರುವುಗಳ ಮೂಲಕ ಊಹೆಗೂ ನಿಲುಕದಂತೆ ಅಪರಾಧಿಯನ್ನು ಅನಾವರಣಗೊಳಿಸುತ್ತದೆ. ಇದು ಎಲ್ಲಾ ರೀತಿಯ ಸಿನಿಮೀಯ ತಂತ್ರಗಳನ್ನು ಒಳಗೊಂಡಿರುವುದು ವಿಶೇಷ ಎಂದು ವಿವರಿಸಿದರು. ಜಾನಪದ ವಿದ್ವಾಂಸ ಮೇಟಿಕೆರೆ ಹಿರಿಯಣ್ಣ ಮಾತನಾಡಿ, ದೊಡ್ಡಮನೆ ಆನಂದ್ ವೃತ್ತಿಯಲ್ಲಿ



ಕೃಷಿಕರಾಗಿದ್ದು , ವಕೀಲರು ಮತ್ತು ಸಿನಿಮಾ ರಂಗದಲ್ಲಿ ಆಸಕ್ತಿ ಹೊಂದಿರುವ ಅವರು ಬಹುಮುಖ ಪ್ರತಿಭೆ. ಇವರ ಟಿಮಿನುಗುತಾರೆಟಿ ಕೃತಿಯು ಸಿನಿಮಾ ರಂಗದ ವಿವಿಧ ಮಗ್ಗುಲುಗಳನ್ನು ಪರಿಚಯಿಸಿದರೆ, ಟಿಆನೆ ನಡೆದಿದ್ದೇ ದಾರಿಟಿ ಕೃತಿಯು ಮಾನವ ಮತ್ತು ವನ್ಯಮೃಗಗಳ ನಡುವಿನ ಸಂಘರ್ಷವನ್ನು ಹೃದಯಸ್ಪರ್ಶಿಯಾಗಿ ಚಿತ್ರಿಸಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಎವಿಕೆ ಕಾಲೇಜಿನ ಪ್ರಾಂಶುಪಾಲ ಡಾ.ಸೀ.ಚ. ಯತೀಶ್ವರ್ ಮಾತನಾಡಿ, ಡಿಜಿಟಲ್ ಯುಗದಲ್ಲಿ ಓದುವ ಹವ್ಯಾಸ ಕಡಿಮೆಯಾಗುತ್ತಿದೆ. ಪಠ್ಯದ ಓದಿನ ಜೊತೆಗೆ ಸಾಹಿತ್ಯದ ಓದು ವ್ಯಕ್ತಿತ್ವದ ಬೆಳವಣಿಗೆಗೆ ಪೂರಕ ಎಂದು ತಿಳಿಸಿದರು. ಲೇಖಕ ದೊಡ್ಡಮನೆ ಆನಂದ್, ಹಿರಿಯ ಲೇಖಕ ತಿರುಪತಿಹಳ್ಳಿ ಶಿವಶಂಕರಪ್ಪ, ಪತ್ರಕರ್ತ ಆರ್.ಪಿ. ವೆಂಕಟೇಶಮೂರ್ತಿ, ಸ್ವಪ್ನ ಬುಕ್ ಹೌಸ್‌ನ ವ್ಯವಸ್ಥಾಪಕಿ ಶಾಂತಲಾ ಹಾಗೂ ಕನ್ನಡ ಪ್ರಾಧ್ಯಾಪಕಿ ಮಹಾಲಕ್ಷ್ಮಿ ಉಪಸ್ಥಿತರಿದ್ದರು. ಸಮಾರಂಭದಲ್ಲಿ ಎವಿಕೆ ಕಾಲೇಜಿನ ವಿದ್ಯಾರ್ಥಿನಿಯರು ದೊಡ್ಡಮನೆ ಆನಂದ್ ಅವರ ಕೃತಿಯ ಕುರಿತಾಗಿ ಲೇಖಕರೊಂದಿಗೆ ಆಸಕ್ತಿದಾಯಕ ಪ್ರಶ್ನೋತ್ತರ ಸಂವಾದ ನಡೆಸಿದರು.

# ವಿದ್ಯಾರ್ಥಿಗಳು ವೃತ್ತಿ ಕೌಶಲಕ್ಕೆ ಆದ್ಯತೆ ನೀಡಿದರೆ ಅನುಕೂಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿದ್ಯಾರ್ಥಿಗಳು ವೃತ್ತಿ ಕೌಶಲ ಹಾಗೂ ಎಐ ಬಗ್ಗೆ ತಿಳಿದುಕೊಂಡರೆ ವಿದ್ಯಾಭ್ಯಾಸದ ನಂತರ ಕೆಲಸ ಪಡೆದುಕೊಳ್ಳಲು ಸ'ಹ'ಕಾರಿಯಾಗ'ಲಿದೆ' ಎಂದು ರಾಜೀವ್ ತಾಂತ್ರಿಕ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ. ರಾಜಶೇಖರ್ ಹೇಳಿದರು.




ನಗರದ ಆರ್.ಸಿ. ರಸ್ತೆ ಗಂಧದಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನಿರ್ವಹಣಾಶಾಸ್ತ್ರ ವಿಭಾಗದಿಂದ ಬುಧವಾರ ಬಿಬಿಎ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಂದಿನ ಜಾಗತಿಕ ಯುಗದಲ್ಲಿ ಕೇವಲ ಪಠ್ಯ ಜ್ಞಾನ ಸಾಲದು, ಪ್ರಾಯೋಗಿಕ ಕೌಶಲ್ಯಗಳು ಉತ್ತಮ ಸಂವಹನ ಮತ್ತು ನಿರ್ಧಾರ ಸಾಮರ್ಥ್ಯ ಅಗತ್ಯ. ವ್ಯವಹಾರಿಕ ಕ್ಷೇತ್ರದಲ್ಲಿ ಬಿಬಿಎ ವಿದ್ಯಾರ್ಥಿಗಳು ಹೆಚ್ಚಾಗಿ ತೊಡಗಿಕೊಳ್ಳುವುದರಿಂದ ಯಾವುದೇ ಉದ್ಯಮವನ್ನು ಆರಂಭಿಸುವ ಮೊದಲು ಸರಿಯಾದ ಯೋಜನೆ ಮಾಡುವುದು, ಅತ್ಯಂತ ಮುಖ್ಯ.

ಎಂ.ಬಿ.ಎ. ವ್ಯವಹಾರ ನಿರ್ವಹಣೆಯಲ್ಲಿನ ಉನ್ನತ ಶಿಕ್ಷಣವಾಗಿದ್ದು, ವಿದ್ಯಾರ್ಥಿಗಳಿಗೆ ನಿರ್ವಹಣಾ ಕೌಶಲ್ಯಗಳು ಮತ್ತು ನಾಯಕತ್ವ ಗುಣಗಳನ್ನು ಅಭಿವೃದ್ಧಿ ಪಡಿಸಲು ಸಹಾಯ ಮಾಡುತ್ತದೆ ಎಂದರು.

ರಾಜೀವ್ ಸಂಸ್ಥೆಯ ಶೋಭ ಮಾತನಾಡಿ, ಹೆಣ್ಣು ಮಕ್ಕಳು ಯಾರ ಮೇಲು ಅವಲಂಬಿತರಾಗದೆ ತಮ್ಮ ಜೀವನವನ್ನು ತಾವೇ ನಿರ್ಮಿಸಿಕೊಳ್ಳಬೇಕು.

ಶಿಕ್ಷಣ ಮತ್ತು ಆತ್ಮವಿಶ್ವಾಸದ ಮೂಲಕ ಅವರು ತಮ್ಮ ಗುರಿಗಳನ್ನು ಸಾಧಿಸಬಹುದು. ವೃತ್ತಿ ಕೌಶಲ್ಯಗಳು ವಿದ್ಯಾರ್ಥಿಗಳಲ್ಲಿ ಸ್ಪಷ್ಟವಾಗಿ ಆಲೋಚನೆಗಳನ್ನು ವ್ಯಕ್ತಪಡಿಸಲು ಸಹಕಾರಿ. ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯಾರ್ಥಿಗಳು ಕೌಶಲ್ಯಗಳನ್ನು ಬೆಳೆಸಿಕೊಂಡು, ಹೊಸ ತಂತ್ರಜ್ಞಾನಗಳನ್ನು ಕಲಿತು ಸವಾಲುಗಳನ್ನು ಎದುರಿಸಲು ಸಿದ್ಧರಾಗಬೇಕು ಎಂದು ಹೇಳಿದರು.

ಕಾಲೇಜಿನ ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಅಧ್ಯಕ್ಷತೆ ವಹಿಸಿದ್ದರು, ನಿರ್ವಹಣಶಾಸ್ತ್ರ ವಿಭಾಗದ ಉಪನ್ಯಾಸಕರಾದ ಡಾ. ಸ್ವಪ್ನ ಜಿ.ಆರ್., ತಬ್ರೇಜ್, ಯೋಗೇಶ್, ಅತಿಥ್ ಹಾಗೂ ಇತರರು ಹಾಜರಿದ್ದರು.

# ಜಿಲ್ಲಾಧಿಕಾರಿ ವಿರುದ್ಧ ನಿರಾಧಾರ ಆರೋಪ: ಖಂಡನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರ ವಿರುದ್ಧ ಮಾಜಿ ಸಚಿವ ಹೆಚ್.ಡಿ. ರೇವಣ್ಣ ಅವರು ವಿನಾಕಾರಣ ಸುಳ್ಳು ಆರೋಪ ಮಾಡುವುದನ್ನು ನಿಲ್ಲಿಸಬೇಕು ಎಂದು ಜಿಲ್ಲಾ ವಾಲ್ಮೀಕಿ ಸಮಾಜದ ಅಧ್ಯಕ್ಷ ಮಧುನಾಯಕ ಒತ್ತಾಯಿಸಿದ್ದಾರೆ.

ಕೆ.ಎಸ್.ಲತಾಕುಮಾರಿ ಅವರು ಅಧಿಕಾರ ವಹಿಸಿಕೊಂಡ ದಿನದಿಂದಲೇ ಉತ್ತಮ ಕೆಲಸ ಮಾಡುತ್ತಿದ್ದಾರೆ. ಹಿಂದಿನ ಡಿಸಿಗಳ ಪೈಕಿ ಅನೇಕರು ಎಸಿ ಕಚೇರಿ ಬಿಟ್ಟು ಹೊರ ಬರುತ್ತಿರಲಿಲ್ಲ. ಆದರೆ ಲತಾ ಕುಮಾರಿ ಅವರು, ಜನಸ್ಪಂದನಾ ಸಭೆಗಳಿಂದ ಹಿಡಿದು, ಬೆಳೆಹಾನಿ ಪ್ರದೇಶಕ್ಕೆ ಭೇಟಿ, ಜನಗಣತಿ ಖುದ್ದು ಪರಿಶೀಲನೆ, ಅಭಿವೃದ್ಧಿ ಕುರಿತು ಸಭೆಗಳನ್ನು ಮಾಡುತ್ತಿದ್ದಾರೆ. ಇದಕ್ಕಾಗಿ ಜಿಲ್ಲಾದ್ಯಂತ ಸುತ್ತಾಡುತ್ತಿದ್ದಾರೆ.

ತಾಲೂಕು ಕೇಂದ್ರಗಳಿಗೆ ಖುದ್ದು ಭೇಟಿ ನೀಡಿ ಜನರ ಅಹವಾಲು ಆಲಿಸುತ್ತಿದ್ದಾರೆ. ರೈತರ ಸಮಸ್ಯೆ, ಮೂಲಸೌಕರ್ಯ ಕೊರತೆ, ಕಂದಾಯ ಇಲಾಖೆ ಕೆಲಸಗಳು ಸೇರಿದಂತೆ ಜನರ ಕಷ್ಟ-ಸುಖಗಳಿಗೆ ತಕ್ಷಣ ಸ್ಪಂದಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಅಧಿಕಾರಿಗಳು ಭ್ರಷ್ಟಾಚಾರ ಮಾಡಿದ್ದರೆ, ಆ ಮಾಹಿತಿ ರೇವಣ್ಣ ಅವರ ಬಳಿ ಇದ್ದರೆ ಆ ಬಗ್ಗೆ ಸರ್ಕಾರಕ್ಕೆ ದೂರು ಕೊಡಲಿ, ಅದನ್ನು ಬಿಟ್ಟು ಭೂಸ್ವಾಧೀನ



ವಿಚಾರದಲ್ಲಿ, ಪರಿಹಾರ ಹಣ ವಾಸಪ್ ಹೋಗಿದೆ ಎಂದು ಸುಳ್ಳು ಆರೋಪ ಮಾಡುವುದು ಅವರ ಹಿರಿತನಕ್ಕೆ ಶೋಭೆ ತರುವುದಿಲ್ಲ ಎಂದಿದ್ದಾರೆ.

ಡಿಸಿ ಅವರು ಕಚೇರಿಯಲ್ಲಿ ಕುಳಿತುಕೊಳ್ಳದೆ ಹಳ್ಳಿ ಹಳ್ಳಿಗೆ ಭೇಟಿ ನೀಡುತ್ತಿದ್ದಾರೆ. ಜನರ ಬಳಿಗೇ ಹೋಗಿ ಸಮಸ್ಯೆ ಬಗೆಹರಿಸುತ್ತಿದ್ದಾರೆ. ಇಂತಹ ಅಧಿಕಾರಿಯ ಮೇಲೆ ಭ್ರಷ್ಟಾಚಾರದ ಆರೋಪ ಮಾಡುವುದು ಸರಿಯಲ್ಲ. ಒಂದು ಡಿಸಿ ಅವರು ತಪ್ಪು ಮಾಡಿದ್ದರೆ, ಕರ್ತವ್ಯಲೋಪ ಎಸಗಿದ್ದರೆ, ಜಿಲ್ಲೆಯ ಉಳಿದ ಶಾಸಕರು ಹಾಗೂ ಸಂಸದರೂ ದನಿ ಎತ್ತ ಬಹುದಿತ್ತು ಅಲ್ಲವೇ, ಬೇರೆ ಯಾರಿಗೂ ಕಾಣದ ಲೋಪ ರೇವಣ್ಣ ಅವರೊಬ್ಬರಿಗೇ ಕಾಣುತ್ತದೆ ಎಂದರೆ, ಇದು ದುರುದ್ದೇಶ ಅಲ್ಲದೆ ಮತ್ತೇನು ಅಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಕೇವಲ ರಾಜಕೀಯ ಕಾರಣಕ್ಕೆ ಆರೋಪ ಮಾಡುವುದಲ್ಲ. ಈ ಬಾರಿಯ ಜನಗಣತಿಯಲ್ಲಿ ರಾಜ್ಯದಲ್ಲೇ ಹಾಸನ ಜಿಲ್ಲೆಯಲ್ಲಿ ಈ ಕಾರ್ಯ ಪೂರ್ಣಗೊಂಡಿದೆ. ಇದಕ್ಕೆ ಕಾರಣ ಜಿಲ್ಲಾಧಿಕಾರಿ ಹಾಗೂ ಗಣತಿಯಲ್ಲಿ ತೊಡಗಿದವರು. ಡಿಸಿ ಅವರು ಬೇಕಾಬಿಟ್ಟಿ ಕೆಲಸ ಮಾಡಿದ್ದರೆ, ಇದೆಲ್ಲ ಆಗುತ್ತಿತ್ತೇ ಎಂಬುದನ್ನು ಹಿರಿಯರಾದ ರೇವಣ್ಣ ಅವರು ಒಮ್ಮೆ ಯೋಚಿಸಲಿ ಎಂದಿದ್ದಾರೆ.

ಭೂಸ್ವಾಧೀನ ವಿಚಾರದಲ್ಲಿ ಯಾವುದೇ ಭ್ರಷ್ಟಾಚಾರ ನಡೆದಿಲ್ಲ, ಯಾವುದೇ ಪರಿಹಾರ ವಾಪಸ್ ಹೋಗಿಲ್ಲ ಎಂದು ಸ್ವತಃ ಡಿಸಿ ಅವರೇ ರೇವಣ್ಣ ಅವರ ಆರೋಪಕ್ಕೆ ಸ್ಪಷ್ಟನೆ ನೀಡಿದ್ದಾರೆ. ಇದನ್ನು ಮೀರಿ ಲೋಪ ನಡೆದಿದ್ದರೆ, ರೇವಣ್ಣ ಅವರು ದಾಖಲೆ ಬಿಡುಗಡೆ ಮಾಡಲಿ ಎಂದು ಸವಾಲು ಹಾಕಿದ್ದಾರೆ.

ಆರಂಭದಿಂದಲೂ ಜನಪರ ಕೆಲಸ ಮಾಡುತ್ತಿರುವ ಅಧಿಕಾರಿ ಮೇಲೆ ಅದೂ ಜವಾಬ್ದಾರಿ ಸ್ಥಾನದಲ್ಲಿರುವ ಮಹಿಳೆಯೊಬ್ಬರ ವೈಯಕ್ತಿಕ ದ್ವೇಷದಿಂದ ಆರೋಪ ಮಾಡುವುದು ಖಂಡನೀಯ. ಅಧಿಕಾರಿಗಳ ನೈತಿಕ ಸ್ಥೈರ್ಯ ಕುಗ್ಗಿಸುವ ಇಂತಹ ಹೇಳಿಕೆಗಳನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದ್ದಾರೆ.

# ಹಿರಿಯ ಕಾರ್ಮಿಕ ನಿರೀಕ್ಷಕರಿಗೆ ಬೀಳ್ಕೊಡುಗೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಏಳೆಂಟು ವರ್ಷಗಳಿಂದ ತಾಲ್ಲೂಕಿನ ಹಿರಿಯ ಕಾರ್ಮಿಕ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸಿ ಇದೀಗ ಜಿಲ್ಲಾ ಕಾರ್ಮಿಕಾಧಿಕಾರಿ ಕಚೇರಿಗೆ ವರ್ಗಾವಣೆಯಾದ ವಿಜಯ್ ಕುಮಾರ್ ಅವರಿಗೆ ಬೀಳ್ಕೊಡುಗೆ ನೀಡಲಾಯಿತು.

ಪಟ್ಟಣದ ಹಳೇ ತಾಲ್ಲೂಕು ಕಚೇರಿಯಲ್ಲಿರುವ ಹಿರಿಯ ಕಾರ್ಮಿಕ ನಿರೀಕ್ಷಕರ ಕಚೇರಿಯಲ್ಲಿ ಅರೇಹಳ್ಳಿ ಮಲೆನಾಡು ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರ ಸಂಘ, ಜೊತೆಗೆ ವೇಲಾಪುರಿ ಮತ್ತು ದ್ವಾರಸಮುದ್ರ ಕಟ್ಟಡ ಕಾರ್ಮಿಕರ ಸಂಘದ ಮುಖಂಡರು ಸಂಯುಕ್ತವಾಗಿ ಸನ್ಮಾನಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ವಿಜಯ್ ಕುಮಾರ್ ಅವರು, ಸಮಾಜದ ಮೂಲಸೌಕರ್ಯ ನಿರ್ಮಾಣದ ಬೆನ್ನೆಲುಬಾಗಿರುವ ಕಟ್ಟಡ ಹಾಗೂ ನಿರ್ಮಾಣ ಕಾರ್ಮಿಕರು ಬಹಳಷ್ಟು ಪರಿಶ್ರಮಪಟ್ಟು ಕೆಲಸ ಮಾಡುತ್ತಾರೆ. ಆದರೆ ಅವರಲ್ಲಿ ಹಲವರು ಅವಿದ್ಯಾವಂತರಾಗಿರುವುದರಿಂದ ಲೇಬರ್ ಕಾರ್ಡ್ ಸೇರಿ ವಿವಿಧ ಸಮಸ್ಯೆಗಳನ್ನು ಪರಿಹರಿಸಲು ಕಚೇರಿಗೆ ಬಂದಾಗ ಅವರಿಗೆ ಸಹಾನುಭೂತಿಯಿಂದ ಸ್ಪಂದಿಸಬೇಕು ಎಂದು ನಾನು ಸಿಬ್ಬಂದಿಗೆ ತಿಳಿಸಿದ್ದೆ. ಸಿಬ್ಬಂದಿ ಅದನ್ನು ಇಂದಿಗೂ ಪಾಲಿಸಿಕೊಂಡು ಬರುತ್ತಿದ್ದಾರೆ ಎಂದು ಹೇಳಿದರು.

# ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಸಹಿಸುವುದಿಲ್ಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ರೈತರಿಗೆ ಹಗಲು ವೇಳೆ ನಾಲ್ಕು ಗಂಟೆ ನಿರಂತರ 3 ಫೇಸ್ ವಿದ್ಯುತ್ ಸರಬರಾಜು ಮಾಡಲೇಬೇಕು. ಟ್ರಾನ್ಸ್‌ಫಾರ್ಮರ್ ಕೆಟ್ಟ ಸಂದರ್ಭದಲ್ಲಿ 24 ಗಂಟೆಯೊಳಗೆ ಬದಲಾಯಿಸಬೇಕು. ಪ್ರತಿ ಮೂರು ತಿಂಗಳಿಗೊಮ್ಮೆ ರೈತರೊಂದಿಗೆ ಸಮಾಲೋಚನ ಸಭೆ ನಡೆಸಬೇಕು ಎಂದು ಶಾಸಕ ಸಿಮೆಂಟ್ ಮಂಜು ಸೆಸ್ಕ್ ಅಧಿಕಾರಿಗಳಿಗೆ ಸೂಚಿಸಿದರು.

ಸೋಮವಾರ ಪಟ್ಟಣದ ಸೆಸ್ಕ್ ಕಚೇರಿ ಎದುರು ರೈತರ ಪ್ರತಿಭಟನೆ ವೇಳೆ ಭರವಸೆ ನೀಡಿದಂತೆ, ಮಂಗಳವಾರ ಅಂಬೇಡ್ಕರ್ ಭವನದಲ್ಲಿ ಸೆಸ್ಕ್ ಅಧಿಕಾರಿಗಳು ಮತ್ತು ರೈತರ ಸಭೆಯಲ್ಲಿ ಮಾತನಾಡಿದರು.

ತಾಲ್ಲೂಕಿನಲ್ಲಿ ಹರಿಯುತ್ತಿರುವ ಯಗಚಿ, ವಾಟೆಹೊಳೆ, ಹೇಮಾವತಿ ನದಿಗೆ, ರೈಲು ದಾರಿಗೆ ರೈತರು ತಮ್ಮ ಜಮೀನು ಕಳೆದುಕೊಂಡಿದ್ದಾರೆ. ಇಲ್ಲಿ ಯಾರೂ ಶ್ರೀಮಂತ ರೈತರಿಲ್ಲ. ನಾಲ್ಕಾರು ಎಕರೆ ಹೊಂದಿರುವ ಅತಿ ಚಿಕ್ಕ ರೈತರಿದ್ದಾರೆ. ತಾಲ್ಲೂಕಿನಲ್ಲಿ ವಿದ್ಯುತ್ ಸಮಸ್ಯೆ ಇಂದು ನಿನ್ನೆಯದಲ್ಲ. ನಾಲ್ಕು ವಿದ್ಯುತ್ ಉಪ ಕೇಂದ್ರಗಳ ಅಗತ್ಯವಿದೆ. ಕನಿಷ್ಟ ಮೂರು ಕೇಂದ್ರಗಳಾದರೂ ಬೇಕು. ಸದ್ಯ ದಾನಿಹಳ್ಳಿ ಬಳಿ ಒಂದು ಉಪ ಕೇಂದ್ರ ನಿರ್ಮಾಣವಾಗುತ್ತಿದೆ. ಸದ್ಯದಲ್ಲೇ



ಬ್ಯಾಡರಹಳ್ಳಿ ಬಳಿ ಅತಿ ಶೀಘ್ರದಲ್ಲಿ ನಿರ್ಮಾಣವಾಗುತ್ತದೆ.

ಅಧಿಕಾರಿಗಳಾಗಲಿ, ಜನಪ್ರತಿನಿದಿಗಳಾಗಲಿ, ಎಲ್ಲರೂ ರೈತರ ಮಕಳೇ. ವಿದ್ಯುತ್ ಸರಬರಾಜಿನಲ್ಲಿ ತೊಂದರೆಯಾದ್ದರಿಂದ ಕಳೆದ ವಾರ ಹುಣಸವಳ್ಳಿ ಗ್ರಾಮದಲ್ಲಿ ಯುವ ರೈತನೊಬ್ಬ ಮೃತಪಟ್ಟಿದ್ದು, ಇಂದು ಆ ಕುಟುಂಬ ಅನಾಥವಾಗಿದೆ. ಪರಿಹಾರ ಕಲ್ಪಿಸಲು ಅಧಿಕಾರಿಗಳು ಸಹಕರಿಸಬೇಕು. ರೈತರ ಸಮಸ್ಯೆಗೆ ಅಧಿಕಾರಿಗಳು ಕೂಡಲೆ ಸ್ಪಂದಿಸಬೇಕು. ರೈತರ ಜಮೀನಿನಲ್ಲಿ ಹಾದು ಹೋಗಿರುವ ವಿದ್ಯುತ್ ಕಂಬಗಳನ್ನು ರಸ್ತೆ ಬದಿಗೆ ಹಾಕಬೇಕು. ಕ್ಷೇತ್ರದಲ್ಲಿ ಅನೇಕ ಕಾರಣಗಳಿಂದ ಸುಮಾರು 285 ಮನೆಗಳಿಗೆ ವಿದ್ಯುತ್ ವ್ಯವಸ್ಥೆ ಕಲ್ಪಿಸಲಾಗಿಲ್ಲ ಎಂದರು.

ಸಿಬ್ಬಂದಿ ಕೊರತೆ ಇದ್ದರೆ ನನ್ನ ಗಮನಕ್ಕೆ ತಂದರೆ ಕೂಡಲೆ ಪರಿಹರಿಸುತ್ತೇನೆ. ಇಂಧನ ಸಚಿವರಾದ ಜಾರ್ಜ್ ಅವರು ಪಕ್ಷಬೇಧ ಎಣಿಸದೆ ಅತ್ಯುತ್ತಮವಾಗಿ ಸಹಕರಿಸುತ್ತಿದ್ದಾರೆ. ನನ್ನ ಯಾವುದೇ ಬೇಡಿಕೆ ತಿರಸ್ಕರಿಸಿಲ್ಲ. ಅವರಿಗೆ ಧನ್ಯವಾದ ಸಲ್ಲಿಸುತ್ತೇನೆ ಎಂದರು.

ರೈತ ಮುಖಂಡ ಎಚ್. ಬಿ. ಧರ್ಮರಾಜ್ ಮಾತನಾಡಿ, ಪ್ರತಿದಿನ ಏಳು ಗಂಟೆ ವಿದ್ಯುತ್ ಕೊಡಬೇಕು. ರೈತರೊಡನೆ ಜನಸಂಪರ್ಕ ಸಭೆ ನಡೆಸಬೇಕು. ಜೂನಿಯರ್ ಇಂಜಿನಿಯರ್, ಲೈನ್‌ಮೆನ್ ರವರ ಕರ್ತವ್ಯದ ಬಗ್ಗೆ ಲಾಗ್ ಬುಕ್‌ನಲ್ಲಿ ನಮೂದಿಸಿಲ್ಲ. ವಿದ್ಯುತ್ ಸರಬರಾಜು ಸಂದರ್ಭದಲ್ಲಿ ನಿಲುಗಡೆ ಮಾಡುವುದು ನಿಲ್ಲಬೇಕು. ಇಂದಿಗೂ 24 ಗಂಟೆಯೊಳಗೆ ಟ್ರಾನ್ಸ್‌ಫಾರ್ಮರ್ ಬದಲಾವಣೆ ಮಾಡಿಲ್ಲ. ಹುಣಸವಳ್ಳಿ ಗ್ರಾಮದಲ್ಲಿ ನಡೆದ ಘಟನೆಗೆ ಸಂಬಂಧಿಸಿ ಸಂಬಂಧಪಟ್ಟ ಅಧಿಕಾರಿಗಳನ್ನು ಅಮಾನತುಗೊಳಿಸಬೇಕು.

ವಿದ್ಯುತ್ ಅವಘಢದಿಂದ ಮೃತಪಟ್ಟ ವ್ಯಕ್ತಿಗೆ ಕಾಡಾನೆ ದಾಳಿಗೆ ಸಿಲುಕಿ ಮೃತಪಟ್ಟ ವ್ಯಕಿಗೆ ಪರಿಹಾರ ಕೊಡುವಂತೆ ಕೊಡಬೇಕು ಎಂದು ಒತ್ತಾಯಿಸಿದರು.

ಸಭೆಯಲ್ಲಿ ಸೆಸ್ಕ್ ಕಾರ್ಯಪಾಲಕ ಇಂಜಿನಿಯರ್ ವೆಂಕಟೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವಿಕುಮಾರ್, ಜೂನಿಯರ್ ಇಂಜಿನಿಯರ್ ಕುಮಾರ್, ತಾ. ಪಂ. ಕಾರ್ಯ ನಿರ್ವಹಣಾಧಿಕಾರಿ ಸುಬ್ರಹ್ಮಣ್ಯ ಶರ್ಮ, ಪ.ಪಂ. ಮುಖ್ಯಾಧಿಕಾರಿ ಮಂಜುನಾಥ್ ಉಪಸ್ಥಿತರಿದ್ದರು.

# ಇತಿಹಾಸದಲ್ಲಿ ಈ ದಿನ

## ಮೇ-07

1945: ಜರ್ಮನಿಯ ಶರಣಾಗತಿ (ದ್ವಿತೀಯ ವಿಶ್ವಯುದ್ಧ): ನಾಜಿ ಜರ್ಮನಿ ಮಿತ್ರ ರಾಷ್ಟ್ರಗಳಿಗೆ ಶರಣಾದ ದಿನ

1998: ಪೋಖ್ರಾನ್-2 ಅಣು ಪರೀಕ್ಷೆಗಳುಗೆ ಮುನ್ನ ಭಾರತ ಅಂತಿಮ ಸಿದ್ಧತೆಗಳನ್ನು ಪೂರ್ಣಗೊಳಿಸಿತು.

2000: ವ್ಲಾಡಿಮಿರ್ ಪುಟಿನ್ ರಷ್ಯಾದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದರು.

**ಜನನ**

1926: ಎಂ.ಎನ್. ನಂಬಿಯಾರ್, ದಕ್ಷಿಣ ಭಾರತೀಯ ಚಿತ್ರರಂಗದ ಖ್ಯಾತ ನಟ

**ನಿಧನ**

1924: ಅಲ್ಲೂರಿ ಸೀತಾರಾಮ ರಾಜು, ಸ್ವಾತಂತ್ರ್ಯ ಹೋರಾಟಗಾರ

2001: ಗ್ಯಾರಿ ಕೂಪರ್, ಹಾಲಿವುಡ್ ನಟ

# ಬಿಳಿಚೌಡಯ್ಯ ವಿರುದ್ಧ ಅಪಪ್ರಚಾರ ನಿಲ್ಲಿಸದಿದ್ದರೆ ಪ್ರತ್ಯುತ್ತರ ಖಚಿತ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಬಿಳಿಚೌಡಯ್ಯ ರಾಜಕೀಯಕ್ಕೆ ಬರುವ ಮೊದಲೇ ಶೋಷಿತ ಸಮುದಾಯದ ಧ್ವನಿಯಾಗಿ ಕೆಲಸ ಮಾಡಿದ್ದು, ಅವರ ವಿರುದ್ಧ ಇಲ್ಲಸಲ್ಲದ ಆರೋಪ ಮಾಡುವುದು ಸರಿಯಲ್ಲವೆಂದು ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಹಾರನಹಳ್ಳಿ ಶಿವಮೂರ್ತಿ ಹಾಗು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಹರಪನಹಳ್ಳಿ ಜಯಣ್ಣ ಅವರು ತಿರುಗೇಟು ನೀಡಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ಅವರು, ಬಿಳಿಚೌಡಯ್ಯ ಅವರ ಏಳಿಗೆ ಸಹಿಸಲಾಗದೆ ಕೆಲವರು ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ. ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಅಜ್ಜಪ್ಪ ಇತ್ತೀಚೆಗೆ ನೀಡುತ್ತಿರುವ ಹೇಳಿಕೆಗಳು ಹಾಸ್ಯಾಸ್ಪದವಾಗಿದೆ. ಎಲ್ಲಾ ಹಿಂದುಳಿದ ವರ್ಗದ ಮುಖಂಡರ ಬೆಂಬಲದೊಂದಿಗೆ ಬಂದಿರುವ ಚೌಡಯ್ಯ ಅವರ ಸೇವೆಯನ್ನು ಕಡೆಗಣಿಸಿ ಯಾರಿಗೂ ಸಹಾಯ ಮಾಡಿಲ್ಲ ಎನ್ನುವುದು ಸತ್ಯಕ್ಕೆ ದೂರವಾದುದು ಎಂದರು.

ಅಜ್ಜಪ್ಪ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಯತ್ನಗಳು ನಡೆದಾಗ ನಾವು ಸ್ವತಃ ಮುಂದೆ ಬಂದು ಅವರನ್ನು ಗಡಿಪಾರು ಆಗದಂತೆ ತಡೆದಿದ್ದೇವೆ. ಅದೇ ಅಜ್ಜಪ್ಪ ನಂತರ ಬಿಳಿಚೌಡಯ್ಯ ಅವರ ಬಳಿ ಬಂದು ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕಾಗಿ ಕೈಮುಗಿದು ಮನವಿ ಮಾಡಿರುವುದು ಎಲ್ಲರಿಗೂ ತಿಳಿದ ಸಂಗತಿ ಎಂದು ಸ್ಮರಿಸಿದರು.

# ಕಸಾಯಿಖಾನೆಗೆ ಸಾಗಿಸುತ್ತಿದ್ದ 17 ಗೋವು ರಕ್ಷಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಕಸಾಯಿಖಾನೆಗೆ ಸಾಗಿಸುತ್ತಿದ್ದ 17 ಗೋವುಗಳನ್ನು ವಿಶ್ವ ಹಿಂದು ಪರಿಷತ್ ಪದಾಧಿಕಾರಿಗಳ ಸಹಕಾರದಿಂದ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ವಿಶ್ವ ಹಿಂದು ಪರಿಷತ್ ತಾಲೂಕು ಅಧ್ಯಕ್ಷ ಭರತ್ ಬಿರಡಹಳ್ಳಿ ಮಾತನಾಡಿ, ತಾಲ್ಲೂಕಿನ ಹನಿಕೆ ಗ್ರಾಮದಲ್ಲಿ ಅಕ್ರಮವಾಗಿ ಗೋವುಗಳನ್ನು ಬಂಧಿಸಿಟ್ಟು, ಅಲ್ಲಿಂದ ಕಸಾಯಿಖಾನೆಗೆ ಸಾಗಿಸಲು ಸಿದ್ಧತೆ ನಡೆಸುತ್ತಿದ್ದ ಜಾಲವನ್ನು ಪತ್ತೆ ಮಾಡಿದ್ದೇವೆ ಎಂದರು.

ಹನಿಕೆ ಗ್ರಾಮದ ಎಪಿಎಂಸಿ ಆವರಣದಲ್ಲಿ ಗೋವುಗಳನ್ನು ಅಕ್ರಮವಾಗಿ ಸಾಗಾಣಿಕೆ ಮಾಡಲು ಇಟ್ಟಿದ್ದರು. ರಕ್ಷಿಸಲಾದ ಎಲ್ಲಾ ಗೋವುಗಳನ್ನು ಅರಸೀಕೆರೆಯ ಕಸ್ತೂರಬಾ ಗೋಶಾಲೆಗೆ ಸುರಕ್ಷಿತವಾಗಿ ಬಿಡಲಾಗಿದೆ ಎಂದರು.

ತಾಲ್ಲೂಕಿನಲ್ಲಿ ಅಕ್ರಮ ಗೋ ಸಾಗಾಟ ಜಾಲ ಸಕ್ರಿಯವಾಗಿರುವ ಬಗ್ಗೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದು, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ



ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

ಗೋವುಗಳ ರಕ್ಷಣೆ ನಮ್ಮ ಆದ್ಯತೆ. ಅಕ್ರಮವಾಗಿ ಗೋವುಗಳನ್ನು ಕಸಾಯಿಖಾನೆಗೆ ಸಾಗಿಸುವ ದಂಧೆಯ ವಿರುದ್ಧ ನಮ್ಮ ಹೋರಾಟ ನಿರಂತರವಾಗಿರುತ್ತದೆ ಎಂದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248